ಶ್ರೀ ಹೆಚ್.ಎಸ್. ಮಹದೇವಪ್ರಸಾದ್: ಇಲ್ಲಾ ನನಗೆ ಈ ಬಗ್ಗೆ ಸ್ಪಷ್ಟವಾದಂತಹ ಉತ್ತರವು ಬೇಕಾಗಿದೆ. ಇದರಲ್ಲಿ ನಾನು ಕೇಳುವುದಿದೆ.

ಶ್ರೀ ಹೆಚ್.ಸಿ. ಮಹದೇವಪ್ಪ: convert ಮಾಡಿ ಚರ್ಚೆ ಮಾಡುವುದಕ್ಕೆ ಅವಕಾಶವನ್ನು ಕೊಡಿ. ಆದರೆ ಅವರಿಗೆ specific questionಗೆ reply ತೆಗೆದುಕೊಳ್ಳುವುದಕ್ಕೆ ಅವಕಾಶವನ್ನು ಮಾಡಿಕೊಡಿ.

ಅಧ್ಯಕ್ಷರು: ಇದನ್ನು ಅರ್ಧಗಂಟೆಗಳ ಕಾಲ ಚರ್ಚೆ ಮಾಡುವ ಬಗ್ಗೆ convert ಮಾಡಿ ಆಗಿದೆ. ಮತ್ತೆ ಈ ಬಗ್ಗೆ ಕೇಳುವುದಕ್ಕೆ ಅವಕಾಶವಿಲ್ಲ.

ಶ್ರೀ ಹೆಚ್.ಸಿ. ಮಹದೇವಪ್ಪ: ಅವರಿಗೆ specific questionಗೆ reply ಕೊಡಿ ಸಾರ್. ಇದು ರಾಜ್ಯದ ಸಮಸ್ಯೆ, ಈ ಬಗ್ಗೆ ಚರ್ಚೆಯಾಗಬೇಕು. ಅವರು specific question ಏನು ಕೇಳಿದ್ದಾರೆ, ಅದಕ್ಕೆ please give specific answer to the question.

ಶ್ರೀ ಹೆಚ್.ಎಸ್. ಮಹದೇವಪ್ರಸಾದ್: ಮಾನ್ಯ ಸಚಿವರು ಉತ್ತರವನ್ನು ಕೊಡುವುದಕ್ಕೆ ಸಮರ್ಥರಿದ್ದಾರೆ. ಅವರು ಉತ್ತರವನ್ನು ಕೊಡುತ್ತಿದ್ದಾರೆ.

ಅಧ್ಯಕ್ಷರು: ಒಂದು ಸಲ ಅರ್ಧ ಗಂಟೆಗಳ ಕಾಲ ಚರ್ಚೆ ತೆಗೆದುಕೊಳ್ಳುವ ಬಗ್ಗೆ convert ಆದ ಮೇಲೆ ಮತ್ತೆ ಕೇಳುವುದು ಎಂದರೆ ಹೇಗೆ?

ಶ್ರೀ ಹೆಚ್.ಸಿ. ಮಹದೇವಪ್ರಸಾದ್: ಅರ್ಧ ಗಂಟೆಗಳ ಕಾಲ ಚರ್ಚೆ ಮಾಡುವುದು ಆಗಲಿ.

ಅಧ್ಯಕ್ಷರು: ಇದನ್ನು ನಾಳೆಯೇ ತೆಗೆದುಕೊಳ್ಳುತ್ತೇನೆ.

ಶ್ರೀ ಸಿದ್ದರಾಮಯ್ಯ: ಈ ಬಗ್ಗೆ ದಿನವನ್ನು ನಿಗದಿ ಮಾಡಿಬಿಡಿ.

ಅಧ್ಯಕ್ಷರು: ನಾಳೆಯೇ ತೆಗೆದುಕೊಳ್ಳುತ್ತೇನೆ.

ಶ್ರೀ ಸಿದ್ದರಾಮಯ್ಯ: ನಾಳೆಯೇ ತೆಗೆದುಕೊಳ್ಳುತ್ತಾರೆ.

ಅಧ್ಯಕ್ಷರು: ಆಯಿತು.

ಶ್ರೀ ಕಿಮ್ಮನೆ ರತ್ನಾಕರ್: ಮಾನ್ಯ ಅಧ್ಯಕ್ಷರೆ, ನಾನು ಪತ್ರವನ್ನು ಕೊಟ್ಟಿದ್ದೇನೆ.

ಅಧ್ಯಕ್ಷರು: ನೀವು ನನಗೆ ಪತ್ರವನ್ನು ಕೊಟ್ಟಿಲ್ಲ. ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳನ್ನು ಮಂಡಿಸುವುದು.

1(ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು

ಶ್ರೀ ಎ. ರಾಮದಾಸ್ (ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು): ಮಾನ್ಯ ಅಧ್ಯಕ್ಷರೆ, ದಿನಾಂಕ: 03.03.2011ರ 4ನೇ ಪಟ್ಟಿಯಿಂದ ಲಿಖಿತ ಮೂಲಕ

ಉತ್ತರಿಸುವ 80 ಪ್ರಶ್ನೆಗಳ ಪೈಕಿ 71 ಪ್ರಶ್ನೆಗಳ ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಯಿತು.

ಅನುಬಂಧ–1

2. ವಿತ್ತೀಯ ಕಾರ್ಯಕಲಾಪಗಳು

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿ ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೇ, 2010–11ನೇ ಸಾಲಿನ ಪೂರಕ ಅಂದಾಜುಗಳನ್ನು (ಮೂರನೇ ಹಾಗೂ ಅಂತಿಮ ಕಂತು) ಮಂಡಿಸುತ್ತಿದ್ದೇನೆ.

1. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಕೃಷಿ ಮತ್ತು ತೋಟಗಾರಿಕೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ 5354.72 ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.
2. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಪಶುಸಂಗೋಪನೆ ಮತ್ತು ಮೀನುಗಾರಿಕೆ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **2146.42** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **500.00** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.
3. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಆರ್ಥಿಕ'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **20512.46** ಲಕ್ಷ ರೂ.ಗಳಿಗೆ ಮತ್ತು ಬಂಡವಾಳ ಲೆಕ್ಕದಲ್ಲಿ **3709.50** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.
4. 2011ನೇ ಮಾರ್ಚ್ 31ರ ಅಂತ್ಯದೊಳಗಾಗಿ **'ಸಿ.ಆ.ಸು.ಇ.'** ಇದಕ್ಕೆ ಸಂಬಂಧಿಸಿದ ವೆಚ್ಚಗಳ ಬಗ್ಗೆ ಸಂದಾಯ ಮಾಡಬೇಕಾಗಿ ಬರುವುದರಿಂದ ರಾಜಸ್ವ ಲೆಕ್ಕದಲ್ಲಿ **1790.37** ಲಕ್ಷ ರೂ.ಗಳಿಗೆ ಮೀರದ ಇನ್ನೂ ಹೆಚ್ಚಿನ ಮೊಬಲಗನ್ನು ಸರ್ಕಾರಕ್ಕೆ ಮಂಜೂರು ಮಾಡಬೇಕೆಂಬುದಾಗಿ ಪ್ರಸ್ತಾಪಿಸಲಾಗಿದೆ.